ಜೆಎಸ್‌ಎಸ್ ಮಹಾವಿದ್ಯಾಪೀಠ
# ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ)
ಬಿ.ಎನ್. ರಸ್ತೆ, ಮೈಸೂರು –570025
ನ್ಯಾಕ್‌ನಿಂದ 'ಎ ದರ್ಜೆ ಮಾನ್ಯತೆ ಪಡೆದಿದೆ * ಪ್ರಚ್ಛನ್ನ ಉತ್ಕೃಷ್ಟತಾ ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ

☎: 0821-2548236, 2548380 Fax: 0821-2548238 e-mail: jssautonomous@gmail.com

ಪ್ರಕಟಣೆಯ ಕೃಪೆಗಾಗಿ

## ಸ್ವಚ್ಛತಾ ಪಾಕ್ಷಿಕ ಕಾರ್ಯಕ್ರಮ

ಮೈಸೂರಿನ ಬಿ.ಎನ್. ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ ದಿನಾಂಕ 30.01.2018ರಂದು ಸ್ವಚ್ಛತಾ ಪಾಕ್ಷಿಕ ಕಾರ್ಯಕ್ರಮದ ಅಂಗವಾಗಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಸ್ವಚ್ಛತೆಯ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಸೈಕಲ್, ಮೋಟಾರ್ ಬೈಸಿಕಲ್ ಮತ್ತು ಕಾಲ್ನಡಿಗೆ ಜಾಥಾವನ್ನು ಹಮ್ಮಿಕೊಳ್ಳಲಾಗಿತ್ತು. ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿಯವರಾದ ಡಾ. ಸಿ.ಜಿ. ಬೆಟಸೂರಮಠ, ವಿಧಾನಪರಿಷತ್ತಿನ ಮಾಜಿ ಸದಸ್ಯರಾದ ಶ್ರೀ ಮಾದೇಗೌಡ, ಕ್ಷೇತ್ರ ಪ್ರಚಾರ ಇಲಾಖೆಯ ಡಾ. ಪೂರ್ಣಿಮಾ ಪ್ರಸಾದ್, ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯ, ಪ್ರಾಂಶುಪಾಲರಾದ ಪ್ರೊ. ಎಂ. ಮಹಾದೇವಪ್ಪ ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಜಾಥಾದಲ್ಲಿ ಪಾಲ್ಗೊಂಡಿದ್ದರು. ಕಾಲೇಜಿನಿಂದ ಹೊರಟ ಕಾಲ್ನಡಿಗೆ ಜಾಥಾ, ಜೆಎಸ್‌ಎಸ್ ಮಹಾವಿದ್ಯಾಪೀಠದಿಂದ ಹೊರಟ ಮೋಟಾರ್ ಬೈಸಿಕಲ್ ಜಾಥಾ, ವಿದ್ಯಾರಣ್ಯಪುರಂ ವೃತ್ತದಿಂದ ಹೊರಟ ಸೈಕಲ್‌ಜಾಥಾವು ಕಾಲೇಜಿನಲ್ಲಿ ಸಮಾವೇಶಗೊಂಡಿತು. ಜಾಥಾದಲ್ಲಿ ಸ್ವಚ್ಛತೆಯ ಬಗ್ಗೆ ಬೀದಿ ನಾಟಕಗಳನ್ನು ಪ್ರದರ್ಶಿಸಲಾಯಿತು.

ಜಾಥಾದ ನಂತರ ನಡೆದ ಸಭಾಕಾರ್ಯಕ್ರಮವನ್ನು ಶ್ರೀ ಮಾದೇಗೌಡರು ಉದ್ಘಾಟಿಸಿದರು. ಅವರು ಮಾತನಾಡುತ್ತಾ "ಮೈಸೂರು ಒಂದು ಸಾಂಸ್ಕೃತಿಕ ನಗರವಾಗಿರುವಂತೆ ಸುಂದರ ನಗರವೂ ಆಗಿದೆ. ಸ್ವಚ್ಛನಗರಿ ಎಂಬುದನ್ನು ಸದಾ ಉಳಿಸಿಕೊಳ್ಳಲು ಸಾರ್ವಜನಿಕರ ಸಹಕಾರ ಮುಖ್ಯ. ಈ ವರ್ಷ ಸ್ವಚ್ಛ ನಗರ ಸರ್ವೇಕ್ಷಣೆಯಲ್ಲಿ ಮತ್ತೆ ಮೊದಲ ಸ್ಥಾನ ಪಡೆಯುವಂತೆ ಮಾಡಲು ಎಲ್ಲರೂ ಕಾರ್ಯಪ್ರವೃತ್ತರಾಗಬೇಕು" ಎಂದರು.

ಸ್ವಚ್ಛತೆಯ ಪ್ರತಿಜ್ಞಾವಿಧಿ ಬೋಧಿಸಿ ಮಾತನಾಡಿದ ಡಾ. ಸಿ.ಜಿ. ಬೆಟಸೂರಮಠರವರು 'ಗಾಂಧೀಜಿಯವರು ಈ ದೇಶದ ಭವಿಷ್ಯದ ಬಗ್ಗೆ ಸುಂದರವಾದ ಕನಸು ಕಂಡಿದ್ದರು. ಸ್ವಚ್ಛತೆಯು ಗಾಂಧೀಜಿಯವರ ಕನಸೇ ಆಗಿದೆ. ಸ್ವಚ್ಛತೆಯ ವಿಷಯದಲ್ಲಿ ಯಾವುದೇ ಕೆಲಸವನ್ನು ಪರರದು ಎನ್ನದೆ, ಮೇಲು ಕೀಳೆನ್ನದೆ ನಾವು ಮಾಡಿದಾಗ ಮಾತ್ರ ಸ್ವಚ್ಛ ಪರಿಸರ ನಿರ್ಮಾಣ ಸಾಧ್ಯ. ಪ್ರತಿಜ್ಞೆಯಲ್ಲಿ ಸ್ವೀಕರಿಸಿದ ನಡೆ ನುಡಿಯನ್ನು ಪಾಲಿಸುವ ಮೂಲಕ ಸಮಾಜವನ್ನು ಕಸಮುಕ್ತವಾಗಿಸೋಣ" ಎಂದು ಹೇಳಿದರು.

ಡಾ. ಪೂರ್ಣಿಮಾ ಪ್ರಸಾದ್‌ರವರು ಮಾತನಾಡಿ "ಸುತ್ತೂರು ಶ್ರೀಗಳ ಆಶೀರ್ವಾದದಿಂದ ಜೆಎಸ್‌ಎಸ್ ಸಂಸ್ಥೆಗಳ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಈ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸ್ವಚ್ಛ ಭಾರತ ನಿರ್ಮಾಣದಲ್ಲಿ ಭಾರತದ ಪ್ರತಿಯೊಬ್ಬ ನಾಗರೀಕನು ಕೈಜೋಡಿಸಬೇಕು" ಎಂದರು.

ಕಾಲೇಜಿನ ಮುಖ್ಯಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯನವರು ಪ್ರಾಸ್ತಾವಿಕ ಮಾತುಗಳನ್ನಾಡಿ ಸ್ವಾಗತಕೋರಿದರು. ಕು. ಕೆ.ಎಂ. ಕೀರ್ತನಾ ಪ್ರಾರ್ಥಿಸಿದರು. ಡಾ. ಬಿ. ಪ್ರಭುಸ್ವಾಮಿ ಕಟ್ಟಿವಾಡಿ ನಿರೂಪಿಸಿ, ವಂದಿಸಿದರು.

ಸಭಾ ಕಾರ್ಯಕ್ರಮದಲ್ಲಿ ಸ್ವಚ್ಛತೆಯ ಬಗ್ಗೆ ಕಿರುಚಿತ್ರಗಳನ್ನು ಪ್ರದರ್ಶಿಸಲಾಯಿತು. ಸ್ವಚ್ಛತಾ ಪಾಕ್ಷಿಕದ ಅಂಗವಾಗಿ ನಡೆಸಿದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಇದೇ ಸಂದರ್ಭದಲ್ಲಿ ಬಹುಮಾನ ವಿತರಿಸಲಾಯಿತು. ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಎಂ. ಮಹದೇವಪ್ಪ, ವಿದ್ಯಾರ್ಥಿಗಳು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.